CCE RF/PF/RR/PR/NSR/NSPR(A)/666/010

**A**

# ಮಾರ್ಚ್/ಏಪ್ರಿಲ್ 2024 ರ ಪರೀಕ್ಷೆ – 1
# MARCH/APRIL 2024 EXAMINATION-1

Question Paper Serial No.

ಒಟ್ಟು ಮುದ್ರಿತ ಪುಟಗಳ ಸಂಖ್ಯೆ : 12 ]
Total No. of Printed Pages : 12 ]

ಒಟ್ಟು ಪ್ರಶ್ನೆಗಳ ಸಂಖ್ಯೆ : 38 ]
Total No. of Questions : 38 ]

**ಸಂಕೇತ ಸಂಖ್ಯೆ : 85-K**
**Code No. : 85-K**

**CCE RF/PF/RR/PR/NSR/NSPR**
**FULL SYLLABUS**

# ವಿಷಯ : ಸಮಾಜ ವಿಜ್ಞಾನ
# Subject : SOCIAL SCIENCE

**(ಕನ್ನಡ ಮಾಧ್ಯಮ / Kannada Medium)**

**(ಶಾಲಾ ಅಭ್ಯರ್ಥಿ / ಖಾಸಗಿ ಅಭ್ಯರ್ಥಿ / ಶಾಲಾ ಪುನರಾವರ್ತಿತ ಅಭ್ಯರ್ಥಿ / ಖಾಸಗಿ ಪುನರಾವರ್ತಿತ ಅಭ್ಯರ್ಥಿ / ಎನ್.ಎಸ್.ಆರ್. / ಎನ್.ಎಸ್.ಪಿ.ಆರ್.)**

**(Regular Fresh / Private Fresh / Regular Repeater / Private Repeater / NSR / NSPR)**

ದಿನಾಂಕ : 27. 03. 2024 ] [ Date : 27. 03. 2024

ಸಮಯ : ಬೆಳಗ್ಗೆ 10-15 ರಿಂದ ಮಧ್ಯಾಹ್ನ 1-30 ರವರೆಗೆ ] [ Time : 10-15 A.M. to 1-30 P.M.

ಗರಿಷ್ಠ ಅಂಕಗಳು : 80 ] [ Max. Marks : 80

***ಪರೀಕ್ಷಾರ್ಥಿಗಾಗಿ ಸಾಮಾನ್ಯ ಸೂಚನೆಗಳು :***

**Cut here/ಇಲ್ಲಿ ಕತ್ತರಿಸಿ**

1. ಈ ಪ್ರಶ್ನೆಪತ್ರಿಕೆಯು ಒಟ್ಟು 38 ಪ್ರಶ್ನೆಗಳನ್ನು ಹೊಂದಿದೆ.
2. ಈ ಪ್ರಶ್ನೆಪತ್ರಿಕೆಯನ್ನು ಹಿಮ್ಮುಖ ಜಾಕೆಟ್ ಮೂಲಕ ಮೊಹರು (ಸೀಲ್) ಮಾಡಲಾಗಿದೆ. ಪರೀಕ್ಷೆ ಪ್ರಾರಂಭವಾಗುವ ಸಮಯಕ್ಕೆ ನಿಮ್ಮ ಪ್ರಶ್ನೆಪತ್ರಿಕೆಯ ಬಲಬದಿ ಪಾರ್ಶ್ವವನ್ನು ಕತ್ತರಿಸಿ ***(ಬಾಣವನ್ನು ಅನುಸರಿಸಿ), ಎಡಬದಿ ಪಾರ್ಶ್ವವನ್ನು ಕತ್ತರಿಸಬೇಡಿ.*** ಪ್ರಶ್ನೆಪತ್ರಿಕೆಯಲ್ಲಿ ಎಲ್ಲಾ ಪುಟಗಳು ಇವೆಯೇ ಎಂದು ಪರೀಕ್ಷಿಸಿಕೊಳ್ಳಿ.
3. ಪ್ರಶ್ನೆಗಳಿಗೆ ಕೊಟ್ಟಿರುವ ಸೂಚನೆಗಳನ್ನು ಪಾಲಿಸಿ.
4. ಬಲ ಭಾಗದಲ್ಲಿ ಕೊಟ್ಟಿರುವ ಅಂಕಿಗಳು ಪ್ರಶ್ನೆಗಳಿಗಿರುವ ಪೂರ್ಣ ಅಂಕಗಳನ್ನು ತೋರಿಸುತ್ತವೆ.
5. ಪ್ರಶ್ನೆಪತ್ರಿಕೆಯನ್ನು ಓದಿಕೊಳ್ಳಲು 15 ನಿಮಿಷಗಳ ಕಾಲಾವಕಾಶವು ಸೇರಿದಂತೆ, ಉತ್ತರಿಸಲು ನಿಗದಿಪಡಿಸಲಾದ ಸಮಯವನ್ನು ಪ್ರಶ್ನೆಪತ್ರಿಕೆಯ ಮೇಲ್ಭಾಗದಲ್ಲಿ ನೀಡಲಾಗಿದೆ.
6. ನಿಮಗೆ ವಿತರಿಸಲಾಗಿರುವ ಪ್ರಶ್ನೆಪತ್ರಿಕೆಯ ಆವೃತ್ತಿ ( Version ) ಮತ್ತು ನಿಮ್ಮ ಪ್ರವೇಶ ಪತ್ರದಲ್ಲಿ ಮುದ್ರಿತವಾಗಿರುವ ಪ್ರಶ್ನೆಪತ್ರಿಕೆಯ ಆವೃತ್ತಿ ಒಂದೇ ಆಗಿರುವುದನ್ನು ಖಾತರಿಪಡಿಸಿಕೊಳ್ಳಿ.

SOCIAL SCIENCE

ಇಲ್ಲಿಂದ ಕತ್ತರಿಸಿ

**27. 03. 2024**

**TEAR HERE TO OPEN THE QUESTION PAPER**
**ಪ್ರಶ್ನೆಪತ್ರಿಕೆಯನ್ನು ತೆರೆಯಲು ಇಲ್ಲಿ ಕತ್ತರಿಸಿ**

**Tear here**

**I. ಈ ಪ್ರತಿಯೊಂದು ಪ್ರಶ್ನೆ ಅಥವಾ ಅಪೂರ್ಣ ಹೇಳಿಕೆಗೆ ನಾಲ್ಕು ಆಯ್ಕೆಗಳನ್ನು ನೀಡಲಾಗಿದೆ. ಅವುಗಳಲ್ಲಿ ಸೂಕ್ತವಾದ ಒಂದು ಉತ್ತರವನ್ನು ಆರಿಸಿ, ಅದರ ಕ್ರಮಾಕ್ಷರದೊಡನೆ ಪೂರ್ಣ ಉತ್ತರವನ್ನು ಬರೆಯಿರಿ :** **8 × 1 = 8**

1. ಪಂಜಾಬನ್ನು ಬ್ರಿಟಿಷ್ ಸಾಮ್ರಾಜ್ಯದಲ್ಲಿ ವಿಲೀನಗೊಳಿಸಿದವರು

   (A) ಡಾಲ್‌ಹೌಸಿ

   (B) ವೆಲ್ಲೆಸ್ಲಿ

   (C) ರಾಬರ್ಟ್ ಕ್ಲೈವ್

   (D) ಕಾರ್ನ್ ವಾಲೀಸ್

2. ತೀನ್ ಮೂರ್ತಿ ಭವನವಿರುವುದು

   (A) ಜೋಧ್‌ಪುರ

   (B) ಮೈಸೂರು

   (C) ಹೈದರಾಬಾದ್

   (D) ನವ ದೆಹಲಿ

3. ಪರ್ಯಾಯ ಪ್ರಸ್ಥಭೂಮಿಯಲ್ಲಿ ಅತಿ ಹೆಚ್ಚು ಪ್ರದೇಶವನ್ನು ಆವರಿಸಿರುವ ಮಣ್ಣು

(A) ಕಪ್ಪು ಮಣ್ಣು

(B) ಕೆಂಪು ಮಣ್ಣು

(C) ಮೆಕ್ಕಲು ಮಣ್ಣು

(D) ಮರುಭೂಮಿ ಮಣ್ಣು

4. ಭಾರತದ ಹಸಿರು ಕ್ರಾಂತಿಯ ಪಿತಾಮಹ

(A) ವರ್ಗೀಸ್ ಕುರಿಯನ್

(B) ಸರ್ ಎಂ. ವಿಶ್ವೇಶ್ವರಯ್ಯ

(C) ಡಾ. ಎಂ.ಎಸ್. ಸ್ವಾಮಿನಾಥನ್

(D) ನಾರ್ಮನ್ ಬೋರ್ಲಾಗ್

5. ದಕ್ಷಿಣ ಭಾರತದ ಅತ್ಯುನ್ನತ ಶಿಖರ

(A) ಅರ್ಮಕೊಂಡ

(B) ಅನೈಮುಡಿ

(C) ಮಹೇಂದ್ರ ಗಿರಿ

(D) ಗೌರಿ ಶಂಕರ

6. ಮಕ್ಕಳ ಸಹಾಯವಾಣಿ ಸಂಖ್ಯೆಯು

(A) 1089

(B) 1098

(C) 101

(D) 108

7. ವಿಶ್ವಸಂಸ್ಥೆಯು ಮಾನವ ಹಕ್ಕುಗಳ ಉದ್ಘೋಷಣೆ ಮಾಡಿದ ವರ್ಷ

(A) 1947

(B) 1945

(C) 2007

(D) 1948

8. ಪ್ರತಿವರ್ಷ ವಿಶ್ವ ಗ್ರಾಹಕ ದಿನವನ್ನು ಆಚರಿಸುವುದು

(A) ಮಾರ್ಚ್ 15

(B) ಡಿಸೆಂಬರ್ 10

(C) ಜುಲೈ 11

(D) ಜೂನ್ 5

**II. ಈ ಪ್ರತಿಯೊಂದು ಪ್ರಶ್ನೆಗೂ ಒಂದೊಂದು ವಾಕ್ಯದಲ್ಲಿ ಉತ್ತರ ಬರೆಯಿರಿ : 8 × 1 = 8**

9. ವೆಲ್ಲೆಸ್ಲಿಯು ತನ್ನ ಹುದ್ದೆಗೆ ರಾಜಿನಾಮೆ ನೀಡಿ ಇಂಗ್ಲೆಂಡಿಗೆ ಏಕೆ ಮರಳಿದನು ?

10. ಮೊದಲ ಮಹಾಯುದ್ಧಕ್ಕೆ ತಕ್ಷಣದ ಕಾರಣವೇನು ?

11. ವಿಶ್ವಸಂಸ್ಥೆಯ ಸಚಿವ ಸಂಪುಟ ಎಂದು ಕರೆಯಲ್ಪಡುವ ಅಂಗ ಸಂಸ್ಥೆ ಯಾವುದು ?

12. ಸಾಮಾಜಿಕ ಸ್ತರ ವಿನ್ಯಾಸ ಎಂದರೇನು ?

13. ಬಾಲಕಾರ್ಮಿಕ ನಿಷೇಧ ಮತ್ತು ನಿಯಂತ್ರಣ ಕಾಯ್ದೆ (1986) ಯನ್ನು ಏಕೆ ಜಾರಿಗೊಳಿಸಲಾಯಿತು ?

14. ಬಾವಿ ನೀರಾವರಿಯು ಅತಿ ಪ್ರಮುಖವಾದ ನೀರಾವರಿ ಪದ್ಧತಿಯಾಗಿದೆ. ಏಕೆ ?

15. ಕೋಶೀಯ (ವಿತ್ತೀಯ) ನೀತಿ ಎಂದರೇನು ?

16. 'ಟೆಲಿಷಾಪಿಂಗ್' ಇತ್ತೀಚಿನ ದಿನಗಳಲ್ಲಿ ಹೆಚ್ಚು ಜನಪ್ರಿಯವಾಗಿದೆ. ಏಕೆ ?

III. ಈ ಪ್ರತಿಯೊಂದು ಪ್ರಶ್ನೆಗೂ ಎರಡರಿಂದ ನಾಲ್ಕು ವಾಕ್ಯಗಳಲ್ಲಿ ಅಥವಾ ಅಂಶಗಳಲ್ಲಿ ಉತ್ತರಿಸಿ : **8 × 2 = 16**

17. ಭಾರತದಲ್ಲಿ ಸಾಕ್ಷರತೆಯನ್ನು ವೃದ್ಧಿಸಲು ಸರ್ಕಾರವು ಹೇಗೆ ಪ್ರಯತ್ನಿಸುತ್ತಿದೆ ?

**ಅಥವಾ**

ವಿಶ್ವಸಂಸ್ಥೆಯ ಭದ್ರತಾ ಸಮಿತಿಯು ಹೇಗೆ ರಚನೆಗೊಂಡಿದೆ ?

18. ಕೂಲಿಸಹಿತ ದುಡಿಮೆಯು ಕೂಲಿರಹಿತ ದುಡಿಮೆಗಿಂತ ಹೇಗೆ ಭಿನ್ನವಾಗಿದೆ ?

**ಅಥವಾ**

ದೊಂಬಿಗಳನ್ನು ಹೇಗೆ ನಿಯಂತ್ರಿಸಬಹುದು ?

19. ಜುನಾಗಢ್ ಸಂಸ್ಥಾನವನ್ನು ಭಾರತ ಒಕ್ಕೂಟಕ್ಕೆ ಹೇಗೆ ವಿಲೀನಗೊಳಿಸಲಾಯಿತು ?

20. "ಬ್ರಿಟಿಷರ ಕಾಲದ ಆಡಳಿತ ವ್ಯವಸ್ಥೆಯಲ್ಲಿ ಭಾರತೀಯ ಸೈನ್ಯವು ಬ್ರಿಟಿಷರಿಗೆ ಆಧಾರ ಸ್ತಂಭವಾಗಿತ್ತು" ಸಮರ್ಥಿಸಿ.

21. 'ಭಾರತದ ವ್ಯವಸಾಯವು ಮಾನ್ಸೂನ್ ಜೊತೆಯಲ್ಲಿ ಆಡುವ ಜೂಜಾಟವಾಗಿದೆ.' ಹೇಗೆ ?

22. ಭಾರತದಲ್ಲಿ ಉಂಟಾಗುತ್ತಿರುವ ಶಕ್ತಿ ಸಂಪನ್ಮೂಲಗಳ ಕೊರತೆಯನ್ನು ನೀಗಿಸಲು ಹಲವಾರು ಪರಿಹಾರಗಳನ್ನು ಕೈಗೊಳ್ಳುವುದು ಅವಶ್ಯಕವಾಗಿದೆ. ಏಕೆ ?

23. 'ಗ್ರಾಮೀಣ ಜನರು ನಗರಗಳಿಗೆ ವಲಸೆ ಹೋಗುವುದನ್ನು ತಪ್ಪಿಸಬಹುದಾಗಿದೆ' ಹೇಗೆ ?

24. ಹಣದ ಉಳಿತಾಯಕ್ಕೆ ಅಂಚೆ ಕಛೇರಿಗಳು ಹೇಗೆ ಸಹಾಯಕವಾಗಿವೆ ?

**IV. ಈ ಪ್ರತಿಯೊಂದು ಪ್ರಶ್ನೆಗೂ ಆರು ವಾಕ್ಯಗಳಲ್ಲಿ ಅಥವಾ ಅಂಶಗಳಲ್ಲಿ ಉತ್ತರಿಸಿ :**

**9 × 3 = 27**

25. ಗ್ರಾಹಕರಿಗೆ ಬ್ಯಾಂಕುಗಳು ಹೇಗೆ ಸೇವೆ ಸಲ್ಲಿಸುತ್ತವೆ ?

**ಅಥವಾ**

ಒಬ್ಬನು ಉದ್ಯಮಶೀಲನಾಗಲು ಯಾವ ಗುಣಗಳನ್ನು ಹೊಂದಿರಬೇಕು ?

26. ಬಕ್ಸಾರ್ ಕದನವು ಬ್ರಿಟಿಷ್ ಈಸ್ಟ್ ಇಂಡಿಯಾ ಕಂಪನಿಯ ಮೇಲೆ ಬೀರಿದ ಪರಿಣಾಮಗಳೇನು ?

**ಅಥವಾ**

ಭಾರತದ ಸ್ವಾತಂತ್ರ್ಯ ಹೋರಾಟದಲ್ಲಿ ಕ್ರಾಂತಿಕಾರಿಗಳ ಹೋರಾಟದ ವಿಧಾನಗಳು ಹೇಗೆ ಭಿನ್ನವಾಗಿದ್ದವು ?

27. 'ಸಾರಿಗೆಯು ಒಂದು ದೇಶದ ಆರ್ಥಿಕ ಅಭಿವೃದ್ಧಿಯಲ್ಲಿ ನಿರ್ವಹಿಸುವ ಪಾತ್ರ ಮಹತ್ವದ್ದಾಗಿದೆ' ಹೇಗೆ ?

**ಅಥವಾ**

'ಭಾರತದ ಕೈಗಾರಿಕೆಗಳ ಸ್ಥಾನೀಕರಣವು ಹಲವು ಅಂಶಗಳಿಂದ ಪ್ರಭಾವಿತವಾಗಿದೆ' ಹೇಗೆ ?

28. ಸಾರ್ವಜನಿಕ ಹಣಕಾಸಿನ ಮಹತ್ವವನ್ನು ವಿವರಿಸಿ.

**ಅಥವಾ**

ಸುಗ್ಗಿ ಪೂರ್ವ ಹಾಗೂ ಸುಗ್ಗಿ ನಂತರದ ತಂತ್ರಜ್ಞಾನ ಹಸಿರು ಕ್ರಾಂತಿಯನ್ನು ಹೇಗೆ ಉಂಟುಮಾಡಿತು ? ವಿವರಿಸಿ.

29. 'ಮೈಸೂರು ಸಂಸ್ಥಾನದ ಅಭಿವೃದ್ಧಿಯಲ್ಲಿ ದಿವಾನ್ ಕೆ. ಶೇಷಾದ್ರಿ ಅಯ್ಯರ್ ಪ್ರಮುಖ ಪಾತ್ರವಹಿಸಿದ್ದರು' ಸ್ಪಷ್ಟೀಕರಿಸಿ.

30. 'ಆ್ಯನಿ ಬೆಸೆಂಟ್‌ರವರು ಥಿಯೋಸಾಫಿಕಲ್ ಸೊಸೈಟಿಯ ಕಾರ್ಯಚಟುವಟಿಕೆಗಳಿಗೆ ನವ ಚೈತನ್ಯ ನೀಡಿದರು.' ದೃಢೀಕರಿಸಿ.

31. 'ರಷ್ಯಾದೊಂದಿಗೆ ಭಾರತವು ಮೊದಲಿನಿಂದಲೂ ಉತ್ತಮ ಸಂಬಂಧವನ್ನು ಹೊಂದಿದೆ.' ವಿವರಿಸಿ.

32. ಭಾರತದಲ್ಲಿ ನಿರುದ್ಯೋಗ ಸಮಸ್ಯೆ ಕಂಡುಬಂದಿದೆ. ಏಕೆ ?

33. ನಿತ್ಯಹರಿದ್ವರ್ಣ ಅರಣ್ಯಗಳು ಮರುಭೂಮಿ ಅರಣ್ಯಗಳಿಗಿಂತ ಹೇಗೆ ಭಿನ್ನವಾಗಿವೆ ?

**V. ಈ ಪ್ರತಿಯೊಂದು ಪ್ರಶ್ನೆಗೂ ಎಂಟು ವಾಕ್ಯಗಳಲ್ಲಿ ಅಥವಾ ಅಂಶಗಳಲ್ಲಿ ಉತ್ತರಿಸಿ :**

**4 × 4 = 16**

34. ಜಲಿಯನ್ ವಾಲಾಬಾಗ್ ಹತ್ಯಾಕಾಂಡವನ್ನು ವಿವರಿಸಿ.

**ಅಥವಾ**

ಭಾರತದಲ್ಲಿ ಬ್ರಿಟಿಷ್ ಶಿಕ್ಷಣದ ಪರಿಣಾಮಗಳನ್ನು ವಿವರಿಸಿ.

35. 'ಭಾರತದ ಪ್ರಥಮ ಸ್ವಾತಂತ್ರ್ಯ ಸಂಗ್ರಾಮ ವಿಫಲವಾಯಿತು.' ಏಕೆ ?

36. 'ಭಾರತದಲ್ಲಿ ಮಹಿಳೆಯರ ಸ್ಥಾನಮಾನವು ಹಿಂದೆಂದಿಗಿಂತ ಉತ್ತಮವಾಗುತ್ತಿದೆ' ದೃಢೀಕರಿಸಿ.

37. 'ಚಂಡಮಾರುತಗಳು ವಿಧ್ವಂಸಕಾರಿಗಳು' ದೃಢೀಕರಿಸಿ.

**VI.** 38. **ಭಾರತದ ನಕ್ಷೆಯನ್ನು ಬರೆದು, ಅದರಲ್ಲಿ ಈ ಕೆಳಗಿನವುಗಳನ್ನು ಗುರುತಿಸಿ :** **1 + 4 = 5**

a) $23\frac{1}{2}^{\circ}$ ಉತ್ತರ ಅಕ್ಷಾಂಶ

b) ನರ್ಮದಾ ನದಿ

c) ವಿಶಾಖ ಪಟ್ಟಣಂ

d) ಅಮೃತಸರ್

***ದೃಷ್ಟಿ ವಿಕಲಚೇತನ ವಿದ್ಯಾರ್ಥಿಗಳಿಗೆ ಪರ್ಯಾಯ ಪ್ರಶ್ನೆ : (ಪ್ರಶ್ನೆ ಸಂಖ್ಯೆ 38 ರ ಬದಲಿಗೆ)***

ವಿವಿಧೋದ್ದೇಶ ನದಿ ಕಣಿವೆ ಯೋಜನೆಗಳ ಮುಖ್ಯ ಉದ್ದೇಶಗಳನ್ನು ತಿಳಿಸಿ. **5**

DO NOT WRITE ANYTHING HERE